ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 281 ಗ್ರಾಪಂಅ 2011(ಭಾಗ)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ 27-11-2012.

## ಸುತ್ತೋಲೆ

ವಿಷಯ: ಮಕ್ಕಳ ಗ್ರಾಮ ಸಭೆಗಳಲ್ಲಿ ಮಕ್ಕಳ ಅನೈತಿ ಸಾಗಾಟ ತಡೆಗಟ್ಟಲು ಹಾಗೂ ಮಕ್ಕಳ ಸಮಗ್ರ ಅಭಿವೃದ್ಧಿಗಾಗಿ ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ.

ಉಲ್ಲೇಖ:
1) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 367 ಗ್ರಾಪಂಅ 2006 ದಿನಾಂಕ:18-09-2006 ಮತ್ತು 30-10-2007.
2) ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 8 ಗ್ರಾಪಂಅ 2012, ದಿನಾಂಕ: 08-03-2012.
3) ಸರ್ಕಾರದ ಕಾರ್ಯದರ್ಶಿ (ಪಂ.ರಾಜ್) ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರ ಅ.ಸ. ಪತ್ರ ದಿನಾಂಕ: 28-04-2012 ಮತ್ತು 30-05-2012.
4) ಅಪರ ಮುಖ್ಯ ಕಾರ್ಯದರ್ಶಿ ಮತ್ತು ಅಭಿವೃದ್ಧಿ ಆಯುಕ್ತರು ರವರ ಅ.ಸ. ಪತ್ರ ಸಂಖ್ಯೆ: ಮಮಇ 131 ಮಭಾಬ 2012, ದಿನಾಂಕ: 09-11-2012.

ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಪ್ರತಿ ವರ್ಷ ನವೆಂಬರ್ ತಿಂಗಳಿನಲ್ಲಿ ಮಕ್ಕಳ ಹಕ್ಕುಗಳ ದಿನಾಚರಣೆ ಹಮ್ಮಿಕೊಳ್ಳಲು ಮತ್ತು ಈ ತಿಂಗಳಲ್ಲಿ ಒಂದು ದಿನ ಮಕ್ಕಳ ಹಕ್ಕಿನ ಬಗ್ಗೆ ಮಕ್ಕಳ ಗ್ರಾಮ ಸಭೆ ನಡೆಸಲು ಮೀಸಲಿಡಬೇಕೆಂದು ಉಲ್ಲೇಖ(1)ರ ಸುತ್ತೋಲೆಗಳಲ್ಲಿ ಸವಿವರವಾಗಿ ವಿವರಿಸಲಾಗಿದೆ.

ರಾಜ್ಯದಲ್ಲಿನ ಗ್ರಾಮ ಪಂಚಾಯತಿಗಳು ಪ್ರತಿ ವರ್ಷ ವಾರ್ಡ್‌ಸಭೆ ಮತ್ತು ಗ್ರಾಮ ಸಭೆಗಳನ್ನು ನಡೆಸುವ ಬಗ್ಗೆ ಉಲ್ಲೇಖ (2)ರ ಸುತ್ತೋಲೆಯಲ್ಲಿ ಸವಿವರವಾಗಿ ತಿಳಿಸಲಾಗಿದೆ. ಉಲ್ಲೇಖ(3)ರ ಅರೆ ಸರ್ಕಾರಿ ಪತ್ರದಲ್ಲಿ 2012-13ನೇ ಸಾಲಿನಲ್ಲಿ ಮಕ್ಕಳ ಗ್ರಾಮ ಸಭೆಗಳನ್ನು ನವೆಂಬರ್ ಮಾಹೆಯಲ್ಲಿ ಕಡ್ಡಾಯವಾಗಿ ಆಯೋಜಿಸುವಂತೆ ಅಗತ್ಯ ಕ್ರಮ ಕೈಗೊಳ್ಳಲು ಎಲ್ಲಾ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ತಿಳಿಸಲಾಗಿದೆ.

ರಾಜ್ಯದಲ್ಲಿ ಮಕ್ಕಳ ಅನೈತಿಕ ಸಾಗಾಟವು ನಡೆಯುತ್ತಿರುವುದಾಗಿ ಆಗಿಂದಾಗ್ಗೆ ಪತ್ರಿಕೆಯಲ್ಲಿ ವರದಿಯಾಗುತ್ತಿದೆ ಮತ್ತು ಈ ವಿಷಯವನ್ನು ಕುರಿತು ವ್ಯಾಪಕವಾಗಿ ಜಾಗೃತ ಕ್ರಮ ವಹಿಸುವುದು ಸೂಕ್ತ ಆದ್ದರಿಂದ ಮಕ್ಕಳ ಗ್ರಾಮ ಸಭೆಗಳಲ್ಲಿ ಮಕ್ಕಳ ಅನೈತಿಕ ಸಾಗಾಟ ತಡೆಗಟ್ಟಲು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಮಕ್ಕಳ ಗ್ರಾಮ ಸಭೆಯಲ್ಲಿ ಕಡ್ಡಾಯವಾಗಿ ಚರ್ಚಿಸಬೇಕು.

ಮಕ್ಕಳ ಗ್ರಾಮ ಸಭೆಯನ್ನು ಹೆಚ್ಚಿನ ಪರಿಣಾಮಕಾರಿಯಾಗಿ ಹಾಗೂ ಅರ್ಥಪೂರ್ಣವಾಗಿ ನಡೆಸಲು ಈ ಸುತ್ತೋಲೆಯೊಂದಿಗೆ ಲಗತ್ತಿಸಿರುವ ಅನುಬಂಧದಲ್ಲಿ ವಿವರಿಸಿರುವ ವಿಷಯಗಳ ಬಗ್ಗೆ ಅಂಕಿಅಂಶಗಳೊಂದಿಗೆ ಮಕ್ಕಳ ಗ್ರಾಮ ಸಭೆಯಲ್ಲಿ ಕಡ್ಡಾಯವಾಗಿ ಮಂಡಿಸಿ, ಚರ್ಚೆ ನಡೆಸತಕ್ಕದ್ದು.

ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಮಕ್ಕಳ ಗ್ರಾಮ ಸಭೆಯಲ್ಲಿ ಈ ಮೇಲಿನ್ನ ವಿಷಯಗಳನ್ನು ಚರ್ಚಿಸಲು ಮತ್ತು ಅದಕ್ಕೆ ಸಂಬಂಧಪಟ್ಟ ಅಂಕಿ ಅಂಶಗಳನ್ನು ಗ್ರಾಮ ಸಭೆಯಲ್ಲಿ ಮಂಡಿಸಲು ಪಿ.ಡಿ.ಒ / ಕಾರ್ಯದರ್ಶಿಗಳಿಗೆ ನಿರ್ದೇಶನ ನೀಡುವುದಲ್ಲದೆ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಯವರ ಹಂತದಲ್ಲಿ ಎಲ್ಲಾ ವಿಭಿನ್ನ ಇಲಾಖೆಗಳ ಅಂಕಿ ಅಂಶಗಳನ್ನು ಪಡೆಯಲು ಆ ಇಲಾಖೆಗಳೊಂದಿಗೆ ಸಮನ್ವಯ ನಡೆಸಿ ಪಡೆದುಕೊಳ್ಳಲು ಸೂಚಿಸಿದೆ. ಎಲ್ಲಾ ಜಿಲ್ಲೆಗಳಲ್ಲಿ ಮಕ್ಕಳ ಗ್ರಾಮ ಸಭೆಯನ್ನು ನಡೆಸಿದ್ದರ ಅನುಷ್ಠಾನ ವರದಿಯನ್ನು ಜನವರಿ 15ನೇ ತಾರೀಖಿನೊಳಗೆ ಕಳುಹಿಸಲು ಕೋರಿದೆ.

(ವಿ. ರಶ್ಮಿ)
ಸರ್ಕಾರದ ಕಾರ್ಯದರ್ಶಿ (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ:

1) ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2) ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
3) ರಾಜ್ಯದ ಎಲ್ಲಾ ಗ್ರಾಮ ಪಂಚಾಯತಿ ಅಧ್ಯಕ್ಷರು / ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು (ಆಯಾ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಯ ಮುಖಾಂತರ).
4) ಗ್ರಾಅಪ ಇಲಾಖೆಯ ಎಲ್ಲಾ ನಿರ್ದೇಶಕರು.
5) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ / ವೆಬ್‌ಸೈಟ್, ಗ್ರಾ.ಅ.ಪಂ.ರಾಜ್ ಇಲಾಖೆ.
6) ಶಾಖಾ ರಕ್ಷ ಕಡತ / ಹೆಚ್ಚುವರಿ ಪ್ರತಿ.

## ಅನುಬಂಧ

ಪ್ರತಿ ಗ್ರಾಮ ಪಂಚಾಯತಿಯ ಕೆಳಗೆ ಬರುವ ಗ್ರಾಮಗಳಲ್ಲಿ ಗ್ರಾಮವಾರು ನಮೂದು ಮಾಡಿರುವ ವಿಷಯಗಳ ಬಗ್ಗೆ ಅಂಕಿ ಅಂಶಗಳು ಲಭ್ಯವಿರಬೇಕು ಮತ್ತು ಇದನ್ನು ಮಕ್ಕಳ ಗ್ರಾಮ ಸಭೆಯಲ್ಲಿ ಕಡ್ಡಾಯವಾಗಿ ಮಂಡಿಸಿ ಚರ್ಚೆ ನಡೆಸಿದರೆ ಉತ್ತಮ ಚರ್ಚೆಗೆ ಅವಕಾಶವಾಗುತ್ತದೆ ಮತ್ತು ಗ್ರಾಮದಲ್ಲಿ ಇರುವ ವಸ್ತುಸ್ಥಿತಿ ಮುಂದೆ ಬರುತ್ತದೆ.

1. ಗರ್ಭಿಣಿಯರಿಗೆ ಸ್ಥಳೀಯ ಗ್ರಾಮ ಪಂಚಾಯತಿ ವ್ಯಾಪ್ತಿಯ ಅಂಗನವಾಡಿ ಕೇಂದ್ರಗಳಲ್ಲಿ ಪೌಷ್ಠಿಕ ಆಹಾರ/ನ್ಯೂಟ್ರಿಷನ್ ಕಿಟ್‌ಗಳನ್ನು ನೀಡಲಾಗುವ ಕಾರ್ಯಕ್ರಮವನ್ನು ಸರ್ಕಾರ ಹಮ್ಮಿಕೊಂಡಿದೆ. ಇದಕ್ಕಾಗಿ ಗರ್ಭಿಣಿಯರು ಮೊದಲ ಮೂರು ತಿಂಗಳೊಳಗಾಗಿ ಅಂಗನವಾಡಿಯಲ್ಲಿ ನೋಂದಣಿ ಮಾಡಿಸಿಕೊಳ್ಳಬೇಕಾಗುತ್ತದೆ. ಹಾಗಾಗಿ ನಿಮ್ಮ ಗ್ರಾಮದಲ್ಲಿ ಗರ್ಭಿಣಿಯರು ನೋಂದಣಿ ಮಾಡಿಸಿಕೊಳ್ಳದಿದ್ದ ಪಕ್ಷದಲ್ಲಿ ಅದಕ್ಕೆ ಕಾರಣಗಳೇನು? ಹೌದು ಎಂದಾದಲ್ಲಿ ಎಲ್ಲಾ ಗರ್ಭಿಣಿಯರು ನೋಂದಾವಣಿ ಮಾಡಿಕೊಳ್ಳಲು ಏನು ಕ್ರಮ ತೆಗೆದುಕೊಂಡಿದ್ದೀರಿ?

2. ತಮ್ಮ ಗ್ರಾಮ ಪಂಚಾಯತಿ ವ್ಯಾಪ್ತಿಯ ಗರ್ಭಿಣಿಯರು ನಿಗಧಿಪಡಿಸಿರುವ ಷೆಡ್ಯೂಲ್‌ನ್ನು ಅನುಸರಿಸಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ತಪಾಸಣೆಗೆ ಒಳಗಾಗುತ್ತಿದ್ದಾರೆಯೇ? ಇಲ್ಲದಿದ್ದಲ್ಲಿ ಇದರ ಬಗ್ಗೆ ಕೈಗೊಂಡ ಕ್ರಮಗಳೇನು?

3. ಗರ್ಭಿಣಿಯರು ವೈದ್ಯ ತಪಾಸಣೆಯೊಂದಿಗೆ ಆಸ್ಪತ್ರೆಗಳಲ್ಲಿಯೇ ಮಗುವಿಗೆ ಜನ್ಮ ನೀಡಬೇಕು. ಮನೆಯಲ್ಲಿಯೇ ಮಕ್ಕಳಿಗೆ ಜನ್ಮ ನೀಡುವುದು ತಾಯಿ ಮತ್ತು ಮಗುವಿಗೆ ಅಪಾಯಕಾರಿ. ಇದಕ್ಕಾಗಿ ನಿಮ್ಮ ಗ್ರಾಮ ಪಂಚಾಯತ್‌ನಲ್ಲಿ ಎಲ್ಲಾ ಅನುಕೂಲವಿದೆಯೇ? ಇಲ್ಲದಿದ್ದ ಪಕ್ಷದಲ್ಲಿ ಈ ನಿಟ್ಟಿನಲ್ಲಿ ಏನು ಕ್ರಮ ತೆಗೆದುಕೊಂಡಿದ್ದೀರಿ?

4. ಹೆಣ್ಣು ಭ್ರೂಣ ಹತ್ಯೆಯನ್ನು ತಡೆಯುವ ಬಗ್ಗೆ ಗ್ರಾಮಸ್ಥರಲ್ಲಿ ಅರಿವು ಮೂಡಿಸಲು ಯಾವ ಕ್ರಮಗಳನ್ನು ಕೈಗೊಂಡಿದ್ದೀರಿ? ಹೆಣ್ಣು ಮತ್ತು ಗಂಡು ಮಕ್ಕಳಿಗೆ ಸಮಾನ ರೀತಿಯಲ್ಲಿ ಅವಕಾಶಗಳು ದೊರೆಯುತ್ತಿವೆಯೇ?

5. ನಿಮ್ಮ ಗ್ರಾಮದಲ್ಲಿ ಅಂಗನವಾಡಿಗೆ ಅಂದರೆ 6 ವರ್ಷದೊಳಗೆ ದಾಖಲಾಗಬೇಕಾಗಿರುವ ಮಕ್ಕಳ ಸಂಖ್ಯೆ ಎಷ್ಟು? ಎಷ್ಟು ಮಕ್ಕಳ ದಾಖಲಾಗಿರುತ್ತವೆ? ಯಾವುದಾದರೂ ಮಕ್ಕಳ ದಾಖಲಾಗದೆ ಇದ್ದಲ್ಲಿ ಅವರನ್ನು ಅಂಗನವಾಡಿಗೆ ದಾಖಲು ಮಾಡಲು ಏನು ಕ್ರಮ ಕೈಗೊಂಡಿರುತ್ತೀರಿ?

6. ಅಂಗನವಾಡಿಯಲ್ಲಿ ದಾಖಲಾಗುವ ಮಕ್ಕಳು ನಿಗದಿತವಾಗಿ ಬರುತ್ತಿದ್ದಾರೆಯೇ? ಅವರುಗಳು ಬಾರದಿದ್ದಲ್ಲಿ ಮತ್ತೆ ಅಂಗನವಾಡಿಗೆ ಬರುವಂತೆ ಮನವೊಲಿಸಲು ನಿಮ್ಮ ಕ್ರಮವೇನು?

7. ಸಬಲ ಯೋಜನೆಯಡಿಯಲ್ಲಿ 9 ಜಿಲ್ಲೆಗಳಲ್ಲಿ 11 ರಿಂದ 18 ವರ್ಷಗಳ ಹೆಣ್ಣು ಮಕ್ಕಳಿಗೆ ನೇರವಾಗಿ ಯೋಜನೆಯ ಅನುಕೂಲ ನೀಡಲಾಗುತ್ತಿದೆಯೇ? ನಿಮ್ಮ ಗ್ರಾಮ ಪಂಚಾಯತಿಯಲ್ಲಿ ಈ ಯೋಜನೆ ಇದೆಯೇ? ಇದ್ದಲ್ಲಿ, ಯೋಜನೆಗೆ ಒಳಪಡುವ ಎಲ್ಲಾ ಹೆಣ್ಣು ಮಕ್ಕಳು ನ್ಯೂಟ್ರೀಷನ್ ಕಿಟ್ ಪಡೆಯುತ್ತಿದ್ದಾರೆಯೇ?

8. ನಿಮ್ಮ ಗ್ರಾಮದಲ್ಲಿ ಅಂಗನವಾಡಿ ಸ್ವಂತ ಕಟ್ಟಡ ಇದೆಯೆ? ಇಲ್ಲದಿದ್ದಲ್ಲಿ ಸ್ವಂತ ಕಟ್ಟಡ ಹೊಂದಲು ಇರುವ ಅನಾನುಕೂಲಗಳೇನು?

9. ಅಂಗನವಾಡಿ ಕೇಂದ್ರಕ್ಕೆ ನೀರಿನ ಸೌಲಭ್ಯ ಇದೆಯೇ? ಇಲ್ಲದಿದ್ದಲ್ಲಿ ಕಾರಣ ಏನು ? ನೀವು ಏನು ಮಾಡಬಹುದು?

10. ಅಂಗನವಾಡಿ ಕೇಂದ್ರಕ್ಕೆ ವಿದ್ಯುತ್ ಸೌಲಭ್ಯ ಇದೆಯೇ? ಇಲ್ಲದಿದ್ದಲ್ಲಿ ಕಾರಣ ಏನು? ಪಡೆಯಲು ಏನು ಕ್ರಮ ತೆಗೆದುಕೊಂಡಿದ್ದೀರಾ?

11. ಅಂಗನವಾಡಿ ಕೇಂದ್ರಕ್ಕೆ ಮಕ್ಕಳ ಸ್ನೇಹಿ ಶೌಚಾಲಯದ ಸೌಲಭ್ಯ ಇದೆಯೇ? ಇಲ್ಲದಿದ್ದಲ್ಲಿ ಕಾರಣ ಏನು?

12. ನಿಮ್ಮ ಗ್ರಾಮದಲ್ಲಿ ಶಾಲೆಗೆ ಹೋಗುವ ಮಕ್ಕಳ ಸಂಖ್ಯೆ ಎಷ್ಟು? ಅದರಲ್ಲಿ ಎಲ್ಲರೂ ಶಾಲೆಗೆ ಹೋಗುತ್ತಿದ್ದಾರಾ?

13. ಶಾಲೆಗೆ ಹೋಗುತ್ತಿರುವ ಮಕ್ಕಳು ನಿಗದಿತವಾಗಿ ಶಾಲೆಗೆ ಹೋಗುತ್ತಿದ್ದಾರೆಯೇ, ಅವರಲ್ಲಿ ಶಾಲೆ ಬಿಟ್ಟ ಮಕ್ಕಳು ಯಾರಾದರೂ ಇದ್ದಾರೆಯೇ? ಇದ್ದಲ್ಲಿ ಅವರು ಮತ್ತೆ ಶಾಲೆಗೆ ಮರಳಿ ಬರುವಂತೆ ಮನವೊಲಿಸಲು ಏನು ಕ್ರಮ ಕೈಗೊಂಡಿದ್ದೀರಾ?

14. ಶಾಲೆಗೆ ಹೋಗುತ್ತಿರುವ ಮಕ್ಕಳು ಮತ್ತು ಶಾಲೆಯನ್ನು ಮಧ್ಯದಲ್ಲೇ ಬಿಟ್ಟು ಬರುತ್ತಿರುವವರ ಸಂಖ್ಯೆಯನ್ನು ತಪಾಸಣೆ ಮಾಡಲಾಗುತ್ತಿದೆಯೇ?

15. ನಿಮ್ಮ ಊರಿನ ಶಾಲೆ/ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಶೌಚಾಲಯ, ನೀರಿನ ಸೌಲಭ್ಯ ಮತ್ತು ಕಾಂಪೌಂಡ್ ಸೌಲಭ್ಯವಿದೆಯೇ, ಇಲ್ಲದಿದ್ದಲ್ಲಿ ಇವುಗಳ ಬಗ್ಗೆ ತೆಗೆದುಕೊಳ್ಳಬಹುದಾದ ಕ್ರಮಗಳೇನು?

16. ನಿಮ್ಮ ಊರಿನಲ್ಲಿ 10 ನೇ ತರಗತಿ ತೇರ್ಗಡೆಯಾದ ನಂತರ ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಹೋಗುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು? ಕಾಲೇಜಿಗೆ ಹೋಗದೇ ಇರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು? ಕಾರಣಗಳೇನು? ಅವರನ್ನು ಕಾಲೇಜಿಗೆ ಕಳುಹಿಸಲು ತೆಗೆದುಕ್ಕೊಳ್ಳಬಹುದಾದ ಕ್ರಮಗಳೇನು?

17. ಗ್ರಾಮಗಳನ್ನು ಬಿಟ್ಟು ವಲಸೆ ಹೋಗುತ್ತಿರುವ ಕುಟುಂಬಗಳು ಇವೆಯೇ? ಇದ್ದಲ್ಲಿ ಅವರು ವಲಸೆ ಹೋಗುವುದನ್ನು ತಪ್ಪಿಸಲು ಏನು ಕ್ರಮ ಕೈಗೊಂಡಿದ್ದೀರಿ?

18. ನಿಮ್ಮ ಗ್ರಾಮದಲ್ಲಿ ಬಾಲ ಕಾರ್ಮಿಕರು ಇದ್ದಾರೆಯೇ? ಬಾಲ ಕಾರ್ಮಿಕ ಪದ್ಧತಿ ನಿಷೇಧದ ಬಗ್ಗೆ ಗ್ರಾಮಸ್ಥರಲ್ಲಿ ಅರಿವು ಇದೆಯೇ? ಇಲ್ಲದಿದ್ದಲ್ಲಿ ಜಾಗೃತಿ ಮೂಡಿಸುವ ಹಾಗೂ ತಡೆಗಟ್ಟಲು ಏನು ಕ್ರಮ ತೆಗೆದುಕೊಂಡಿದ್ದೀರಿ?

19. ನಿಮ್ಮ ಗ್ರಾಮದಲ್ಲಿ ಮಕ್ಕಳು ಶಾಲೆ ಬಿಟ್ಟು ಬಾಲ ಕಾರ್ಮಿಕರಾಗಿ ಕೃಷಿ ಚಟುವಟಿಕೆಗಳನ್ನು ಮಾಡುತ್ತಿದ್ದಾರೆಯೇ? ಮಾಡುತ್ತಿದ್ದಲ್ಲಿ ಅವರನ್ನು ಗುರುತಿಸಿ ಮತ್ತೆ ಶಾಲೆಗೆ ಕರೆತರಲು ಕೈಗೊಂಡಿರುವ ಕ್ರಮಗಳೇನು?

20. ರಾಜ್ಯದಲ್ಲಿ ಮಕ್ಕಳ ಅನೈತಿಕ ಸಾಗಾಟವು ನಡೆಯುತ್ತಿರುವುದಾಗಿ ಆಗಿಂದಾಗ್ಗೆ ಪತ್ರಿಕೆಗಳಲ್ಲಿ ವರದಿಯಾಗುತ್ತಿದ್ದು ಈ ಸಂಬಂಧ ಮಹಿಳೆಯರ ಮತ್ತು ಮಕ್ಕಳ ಅನೈತಿಕ ಸಾಗಾಟದ ವಿರುದ್ಧ ಜನರಲ್ಲಿ ಅರಿವು ಮೂಡಿಸಲು ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ?

21. ಬಾಲ್ಯ ವಿವಾಹ ಪ್ರಕರಣಗಳು ನಿಮ್ಮ ಗ್ರಾಮದಲ್ಲಿ ನಡೆಯುತ್ತಿದೆಯಾ? ಅದನ್ನು ತಡೆಗಟ್ಟುವ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಕ್ರಮವನ್ನು ಕೈಗೊಂಡಿದ್ದೀರಾ?

ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳು ಮಕ್ಕಳ ಗ್ರಾಮ ಸಭೆಯಲ್ಲಿ ಈ ಮೇಲಿನ ವಿಷಯಗಳನ್ನು ಚರ್ಚಿಸಲು ಮತ್ತು ಅದಕ್ಕೆ ಸಂಬಂಧಪಟ್ಟ ಗ್ರಾಮಾವಾರು ಅಂಕಿ ಅಂಶಗಳನ್ನು ಗ್ರಾಮ ಸಭೆಯಲ್ಲಿ ಮಂಡಿಸಲು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು/ ಕಾರ್ಯದರ್ಶಿಗಳಿಗೆ ನಿರ್ದೇಶನ ನೀಡುವುದಲ್ಲದೆ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಯವರ ಹಂತದಲ್ಲಿ ಎಲ್ಲಾ ಇಲಾಖೆಗಳ ಅಂಕಿ ಅಂಶಗಳನ್ನು ಪಡೆಯಲು ಆ ಇಲಾಖೆಗಳೊಂದಿಗೆ ಸಮನ್ವಯ ನಡೆಸಿ ಪಡೆದುಕೊಳ್ಳಬೇಕು. ಎಲ್ಲಾ ಜಿಲ್ಲೆಗಳಲ್ಲಿ ಮಕ್ಕಳ ಗ್ರಾಮ ಸಭೆಯನ್ನು ನಡೆಸಿದ ಬಗ್ಗೆ ನಡವಳಿಕೆ ಹಾಗೂ ವರದಿಯನ್ನು ಜನವರಿ 15ನೇ ತಾರೀಖಿನೊಳಗೆ ಕಡ್ಡಾಯವಾಗಿ ಕಳುಹಿಸಲು ಕ್ರಮ ವಹಿಸುವುದು. ಇದನ್ನು ಅರ್ಥಪೂರ್ಣವಾಗಿ ನಡೆಸಿ ಗ್ರಾಮದ ಹಂತದಲ್ಲಿ ಮಕ್ಕಳ ವಿಷಯಗಳನ್ನು ಗಂಭೀರವಾಗಿ ಚರ್ಚಿಸಲು ಮತ್ತು ಪ್ರತಿ ನಾಲ್ಕು ತಿಂಗಳಿಗೊಮ್ಮೆ ತೆಗೆದುಕೊಳ್ಳಬಹುದಾದ ಪರಿಹಾರಾತ್ಮಕ ಕ್ರಮಗಳನ್ನು ಗ್ರಾಮವಾರು ಗ್ರಾಮೀಣ ನಾಗರಿಕರೊಂದಿಗೆ ಗ್ರಾಮ ಸಭೆಯಲ್ಲಿ ಚರ್ಚಿಸುವುದು.

Rashmi V.

(ವಿ. ರಶ್ಮಿ)
ಸರ್ಕಾರದ ಕಾರ್ಯದರ್ಶಿ (ಪಂ.ರಾಜ್),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.